ಕರ್ನಾಟಕ ಸರ್ಕಾರ
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
"ವಾರ್ತಾ ಭವನ", ಡಿ.ಸಿ.ಕಂಪೌಂಡ, ಧಾರವಾಡ-580001. ( 0836-2447469)
ಇ-ಮೇಲ್:- varthabhavandwd74@gmail.com

ದಿನಾಂಕ: 05-12-2018
ವಾವಿಸಂ:664

# ಶತಮಾನ ಕಂಡ ಅರಳಿಮರದ ಕಟ್ಟೆ ಸ್ವಚ್ಛತೆ

**ಧಾರವಾಡ (ಕರ್ನಾಟಕ ವಾರ್ತೆ) ಡಿ.05:** ಬರುವ ಜನವರಿ 4,5 ಹಾಗೂ 6 ರಂದು ನಡೆಯಲಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಹಿನ್ನೆಲೆಯಲ್ಲಿ ಜಿಲ್ಲಾಡಳಿತ,ಮಹಾನಗರಪಾಲಿಕೆ ,ಕಸಾಪ ಹಾಗೂ ಕನ್ನಡ ಪರ ಕಾರ್ಯಕರ್ತರು ಸ್ವಚ್ಛತಾ ಆಂದೋಲನ ಆರಂಭಿಸಿದ್ದಾರೆ. ಇಂದು (5-12-2018) ಬೆಳಿಗ್ಗೆ ನಗರದ ಕಾಲೇಜು ರಸ್ತೆಯಲ್ಲಿರುವ 115 ವರ್ಷಗಳನ್ನು ಪೂರೈಸಿರುವ ಅರಳಿ ಮರದ ಕಟ್ಟೆಯನ್ನು ಶುಚಿಗೊಳಿಸಿ, ಕಟಕಟೆಗೆ ಬಣ್ಣ ಬಳಿದು ಸುಂದರಗೊಳಿಸಲಾಯಿತು. ರಂಗಾಯಣದ ನೇತೃತ್ವದಲ್ಲಿ ಕಲಾವಿದರು ಬಣ್ಣ ಹಚ್ಚುವ ಕಾರ್ಯ ಕೈಗೊಂಡರು.

**ಶತಮಾನ ಕಂಡ ವೃಕ್ಷ;** ಕಾಲೇಜು ರಸ್ತೆಯಲ್ಲಿ ಎಲ್.ಐ.ಸಿ.ಕಚೇರಿ ಬಳಿ ಇರುವ ಈ ಅರಳಿ ಮರವನ್ನು ಇಂಗ್ಲೆಂಡ್‌ನ ದೊರೆ, ಇಂಡಿಯಾದ ಚಕ್ರಾಧಿಪತ್ಯ ಹೊಂದಿದ್ದ 7 ನೇಎಡ್ವರ್ಡನ ಪಟ್ಟಾಭಿಷೇಕದ ಸವಿನೆನಪಿಗಾಗಿ, ಶ್ರೀಮತಿ ಹಾಗೂ ಶ್ರೀ ಗಿಬ್ ದಂಪತಿಗಳು ಮತ್ತು ಶ್ರೀ ನೈಟ್ ಅವರ ಉಪಸ್ಥಿತಿಯಲ್ಲಿ ರೊದ್ದ ಶ್ರೀನಿವಾಸರಾಯರು 1903 ರ ಜನವರಿ 1 ರಂದು ನೆಟ್ಟಿದ್ದರು. ಈಗ 115 ವರ್ಷಗಳನ್ನು ಈ ವೃಕ್ಷ ಪೂರೈಸಿದೆ.

ಸ್ವಚ್ಛತಾ ಕಾರ್ಯದಲ್ಲಿ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಬಿ.ಸಿ. ಸತೀಶ್, ಅಪರ ಜಿಲ್ಲಾಧಿಕಾರಿ ಇಬ್ರಾಹಿಂ ಮೈಗೂರ್, ರಂಗಾಯಣ ಆಡಳಿತಾಧಿಕಾರಿ ಕೆ.ಹೆಚ್. ಚನ್ನೂರ, ಆಹಾರ ಇಲಾಖೆಯ ಜಂಟಿನಿರ್ದೇಶಕ ಸದಾಶಿವ ಮರ್ಜಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಎಸ್.ಕೆ. ರಂಗಣ್ಣವರ, ಜಿಲ್ಲಾ ಕ.ಸಾ.ಪ. ಅಧ್ಯಕ್ಷ ಡಾ: ಲಿಂಗರಾಜ ಅಂಗಡಿ, ಪ್ರಕಾಶ ಉಡಕೇರಿ, ಎಸ್.ಎಸ್. ದೊಡ್ಡಮನಿ, ಎಫ್.ಬಿ. ಕಣವಿ, ಶಂಕರ ಹಲಗತ್ತಿ, ಶಂಕರ ಕುಂಬಿ, ಎನ್.ಆರ್. ಬಾಳಿಕಾಯಿ, ಶ್ರೀಶೈಲ ರಾಚಣ್ಣವರ, ಬಸವರಾಜ ವಾಸನದ್, ವಿಜಯ ಮಹಾಂತೇಶ ಹೊಸಕೇರಿ ಹಾಗೂ ಮತ್ತಿತರರು ಇದ್ದರು.